# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಎ.ಕೆ.ಧರ್ಮಣ್ಣ, ಪಂ.ಅ.ಅ., ಶಿರೂರು ಗ್ರಾಮ ಪಂಚಾಯತಿ, ಕುಂದಗೋಳ ತಾಲ್ಲೂಕು, ಧಾರವಾಡ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಕುರಿತು.

**ಓದಲಾಗಿದೆ:**

1) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ. D.O.No.Compt/Uplok/BGM-9108/2017/DRE-4, dated 23.02.2018
2) ಸಮಸಂಖ್ಯೆಯ ಸರ್ಕಾರದ ಪತ್ರ, ದಿನಾಂಕ 06.03.2018

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿನ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ದಿನಾಂಕ: 16.02.2018ರ ವರದಿಯಲ್ಲಿ ಶ್ರೀ ಬಸವರಾಜ ಪರಸಪ್ಪ ಸರಸ್ವತಿ, ಶಿರೂರು ಅಂಚೆ, ಕುಂದಗೋಳ ತಾಲ್ಲೂಕು, ಧಾರವಾಡ ಜಿಲ್ಲೆ ರವರು (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ದೂರುದಾರರ ಜಮೀನಿನಲ್ಲಿ ಕೃಷಿಹೊಂಡ ಮತ್ತು ಬದು ನಿರ್ಮಾಣ ಕಾಮಗಾರಿ ಮಾಡದೆ ಬೋಗಸ್ ಬಿಲ್ ಮಾಡಿ ಹಣ ದುರುಪಯೋಗಪಡಿಸಿಕೊಂಡಿರುವುದಾಗಿ ಸಲ್ಲಿಸಿರುವ ದೂರಿನ ಸಂಬಂಧ ಶ್ರೀಮತಿ ಯಲ್ಲವ್ವ ಬಸಪ್ಪ ನರ್ತಿ, ಅಂದಿನ ಅಧ್ಯಕ್ಷರು, ಶ್ರೀ ಎ.ಕೆ.ಧರ್ಮಣ್ಣ, ಪಂ.ಅ.ಅ. ಮತ್ತು ಶ್ರೀ ಇಸ್ಮಾಯಿಲ್‌ಸಾಬ್ ಎ.ರಾಜೇಖನವರ, ಸದಸ್ಯರು – ಶಿರೂರು ಗ್ರಾಮ ಪಂಚಾಯತಿ, ಕುಂದಗೋಳ ತಾಲ್ಲೂಕು, ಧಾರವಾಡ ಜಿಲ್ಲೆ (ಇನ್ನು ಮುಂದೆ ಕ್ರಮವಾಗಿ 'ಎದುರುದಾರರು 1, 2, ಮತ್ತು 3' ಎಂದು ಕರೆಯಲ್ಪಡುತ್ತಾರೆ) ಇವರ ವಿರುದ್ಧ ದೂರು ದಾಖಲಿಸಿಕೊಂಡು ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 9 ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿದ್ದು, ಕಡತ ಮತ್ತು ದಾಖಲಾತಿಗಳನ್ನು ಕೂಲಂಕುಷವಾಗಿ ಪರಿಶೀಲಿಸಿ ತನಿಖಾಧಿಕಾರಿಗಳು ವರದಿ ನೀಡಿರುತ್ತಾರೆ.

ಸದರಿ ವರದಿಯಲ್ಲಿ ಎದುರುದಾರರಿಂದ ಆಕ್ಷೇಪಣೆಗಳನ್ನು ಪಡೆದಿದ್ದು, ಕೃಷಿಹೊಂಡವನ್ನು ಶ್ರೀ ಬಸವರಾಜ ಪರಸಪ್ಪ ಸರಸ್ವತಿ ರವರ ಜಮೀನಿನಲ್ಲಿ ನಿರ್ಮಿಸಿದ್ದು, ಹೆಸರು ತಪ್ಪಾಗಿ ಶ್ರೀ ಪರಸಪ್ಪ ಬಸಪ್ಪ ಸರಸ್ವತಿ ಎಂದು ನಮೂದಾಗಿದೆ. 2016-17 ನೇ ಸಾಲಿನ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ಶ್ರೀ ಪರಸಪ್ಪ ಬಸಪ್ಪ ಸರಸ್ವತಿ ರವರ ಸರ್ವೆ ನಂ.251/1 ರಲ್ಲಿ ಕೃಷಿ ಹೊಂಡ ನಿರ್ಮಿಸಲಾಗಿದೆ. ಮಸ್ಟರ್ ರೋಲ್ ಮತ್ತಿತರೆ ದಾಖಲೆಗಳಲ್ಲಿ ನಮೂದಾಗಿರುವ ಹೆಸರು ಮತ್ತು ದೂರುದಾರರ ಹೆಸರಿಗೆ ಸಂಬಂಧ ಇಲ್ಲದಿರುವ ಹಿನ್ನೆಲೆಯಲ್ಲಿ ತನಿಖೆ ನಡೆಸಲಾಗಿದೆ.

ಕಡತದಲ್ಲಿನ ಸಂಗತಿಗಳು ಹಾಗೂ ದಾಖಲಾತಿಗಳಿಂದ ಎದುರುದಾರರು ಸರ್ಕಾರಿ/ ಸಾರ್ವಜನಿಕ ನೌಕರರಾಗಿ ಎದುರುದಾರರು ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ವರ್ತನೆ/ ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುವ ಹಿನ್ನೆಲೆಯಲ್ಲಿ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1) ರನ್ವಯ ಎದುರುದಾರರು ಶಿಸ್ತು ಕ್ರಮಕ್ಕೆ ಬಾಧ್ಯರಾಗಿರುತ್ತಾರೆಂದು ಕಂಡು ಬರುವುದರಿಂದ, ಎದುರುದಾರರಾದ ಶ್ರೀ ಎ.ಕೆ.ಧರ್ಮಣ್ಣ, ಪಂ.ಅ.ಅ., ಶಿರೂರು ಗ್ರಾಮ ಪಂಚಾಯತಿ, ಕುಂದಗೋಳ ತಾಲ್ಲೂಕು, ಧಾರವಾಡ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14-ಎ ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಹಾಗೂ ಶ್ರೀಮತಿ ಯಲ್ಲವ್ವ ಬಸಪ್ಪ ನರ್ತಿ, ಅಂದಿನ ಅಧ್ಯಕ್ಷರು ಮತ್ತು ಶ್ರೀ ಇಸ್ಮಾಯಿಲ್‌ಸಾಬ್ ಎ.ರಾಜೇಖನವರ, ಸದಸ್ಯರು – ಶಿರೂರು ಗ್ರಾಮ ಪಂಚಾಯತಿ, ಕುಂದಗೋಳ ತಾಲ್ಲೂಕು, ಧಾರವಾಡ ಜಿಲ್ಲೆ ಇವರುಗಳ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರನ್ವಯ ಕ್ರಮ ಜರುಗಿಸಲು ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಪ್ರಸ್ತಾವನೆಯನ್ನು ಪರಿಶೀಲಿಸಿ, ಶ್ರೀಮತಿ ಯಲ್ಲವ್ವ ಬಸಪ್ಪ ನರ್ತಿ, ಅಂದಿನ ಅಧ್ಯಕ್ಷರು ಮತ್ತು ಶ್ರೀ ಇಸ್ಮಾಯಿಲ್‌ಸಾಬ್ ಎ.ರಾಜೇಖನವರ, ಸದಸ್ಯರು – ಶಿರೂರು ಗ್ರಾಮ ಪಂಚಾಯತಿ, ಕುಂದಗೋಳ ತಾಲ್ಲೂಕು, ಧಾರವಾಡ ಜಿಲ್ಲೆ ಇವರ ವಿರುದ್ಧ ಪ್ರಕರಣದಲ್ಲಿ ದುರುಪಯೋಗವಾಗಿರುವ ಮೊತ್ತವನ್ನು ವಸೂಲಿ ಮಾಡಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಧಾರವಾಡ ಜಿಲ್ಲಾ ಪಂಚಾಯತಿ ರವರಿಗೆ ಮೇಲೆ ಓದಲಾದ (2) ರಲ್ಲಿ ನಿರ್ದೇಶನ ನೀಡಲಾಗಿದೆ ಹಾಗೂ ಎದುರುದಾರರಾದ ಶ್ರೀ ಎ.ಕೆ.ಧರ್ಮಣ್ಣ, ಪಂ.ಅ.ಅ., ಶಿರೂರು ಗ್ರಾಮ ಪಂಚಾಯತಿ, ಕುಂದಗೋಳ ತಾಲ್ಲೂಕು, ಧಾರವಾಡ ಜಿಲ್ಲೆ ಇವರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14–ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ತೀರ್ಮಾನಿಸಿದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 120 ಗ್ರಾಪಂಕಾ 2018, ಬೆಂಗಳೂರು, ದಿನಾಂಕ: 06.03.2018**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಎ.ಕೆ.ಧರ್ಮಣ್ಣ, ಪಂ.ಅ.ಅ., ಶಿರೂರು ಗ್ರಾಮ ಪಂಚಾಯತಿ, ಕುಂದಗೋಳ ತಾಲ್ಲೂಕು, ಧಾರವಾಡ ಜಿಲ್ಲೆ ರವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳ ನಿಯಮ 14–ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿ ಆದೇಶಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ–8 ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ,

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತ ರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
   (ಮೇಲೆ ಓದಲಾದ (1) ರಲ್ಲಿ ಸಲ್ಲಿಸಲಾದ ಪುಟ ಸಂಖ್ಯೆ 01 ರಿಂದ 33 ರವರೆಗೆ ಮೂಲ ದಾಖಲಾತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲಾಗಿದೆ)
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಧಾರವಾಡ ಜಿಲ್ಲಾ ಪಂಚಾಯತಿ, ಧಾರವಾಡ.
5) ಕಾರ್ಯನಿರ್ವಾಹಕ ಅಧಿಕಾರಿ, ಕುಂದಗೋಳ ತಾಲ್ಲೂಕು ಪಂಚಾಯತಿ, ಕುಂದಗೋಳ, ಧಾರವಾಡ ಜಿಲ್ಲೆ.
   (ಸಂಬಂಧಿಸಿದ ನೌಕರರಿಗೆ ಆದೇಶದ ಪ್ರತಿಯನ್ನು ತಲುಪಿಸಿ ಸರ್ಕಾರಕ್ಕೆ ಸ್ವೀಕೃತಿ ನೀಡುವಂತೆ ಕೋರಿದೆ.)
6) ಶ್ರೀ ಎ.ಕೆ.ಧರ್ಮಣ್ಣ, ಪಂ.ಅ.ಅ., ಶಿರೂರು ಗ್ರಾಮ ಪಂಚಾಯತಿ, ಕುಂದಗೋಳ ತಾಲ್ಲೂಕು, ಧಾರವಾಡ ಜಿಲ್ಲೆ.
7) ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.